ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:32:ಸಂ.ವಿ.ವೇ/2022-23/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿ:08-09-2022.

## ಸುತ್ತೋಲೆ

ವಿಷಯ: 2022-23 ನೇ ಸಾಲಿನ ಸಂತೂರ್ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ಬಗ್ಗೆ

ಉಲ್ಲೇಖ: ಸಮನ್ವಯಾಧಿಕಾರಿಗಳು ಪ್ಲೇಸ್ಮೆಂಟ್ ಸೆಲ್ ಕೇಂದ್ರ ಕಛೇರಿ ಬೆಂಗಳೂರು ರವರ ದಿ:29.08.2022 ರ ಇ-ಮೇಲ್.

***

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ 2022-23 ನೇ ಸಾಲಿನ ಸಂತೂರ್ ಮಹಿಳಾ ವಿದ್ಯಾರ್ಥಿವೇತನಕ್ಕೆ ವಿಪ್ರೋ ಸಂಸ್ಥೆಯವರು ಅರ್ಜಿಯನ್ನು ಅಹ್ವಾನಿಸಿರುತ್ತಾರೆ. ಅದರಂತೆ 1 ರಿಂದ 10 ನೇ ತರಗತಿಯವರೆಗೆ ಸರ್ಕಾರಿ ಶಾಲೆಗಳಲ್ಲಿ, ಪಿ.ಯು.ಸಿ ಯನ್ನು ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡಿ ಉತ್ತೀರ್ಣಗೊಂಡು 2022-23 ನೇ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ಪದವಿ ತರಗತಿಗೆ ಪ್ರವೇಶ ಪಡೆದಿರುವ ಅರ್ಹ ವಿದ್ಯಾರ್ಥಿನಿಯರು ಸಂತೂರ್ ಮಹಿಳಾ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಸದರಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು **ಸೆಪ್ಟಂಬರ್ 18** ಕೊನೆಯ ದಿನಾಂಕವಾಗಿದ್ದು, ಆಸಕ್ತ ವಿದ್ಯಾರ್ಥಿನಿಯರು ಹೆಚ್ಚಿನ ವಿವರಗಳನ್ನು santoor.scholarship@buddy.com ಇ-ಮೇಲ್‌ಗೆ ಸಲ್ಲಿಸಿ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ, ಅಥವಾ ದೂರವಾಣಿ ಸಂಖ್ಯೆ :011-430-92248 (Ext: 121 )(Monday to Friday-10.00 AM to 6PM ) ಗೆ ಕರೆ ಮಾಡಿ ಮಾಹಿತಿ ಪಡೆಯ ಬಹುದಾಗಿರುತ್ತದೆ.

ಸಂತೂರ್ ಮಹಿಳಾ ವಿದ್ಯಾರ್ಥಿವೇತನಕ್ಕೆ ಸಂಬಂದಿಸಿದಂತೆ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು ತಮ್ಮ ಕಾಲೇಜುಗಳ ಸೂಚನಾ ಫಲಕದಲ್ಲಿ ಈ ಮಾಹಿತಿಯನ್ನು ಅಳವಡಿಸಿ, ತರಗತಿಗಳಿಗೆ ತೆರಳಿ ಹೆಚ್ಚಿನ ಮಾಹಿತಿಯನ್ನು ವಿದ್ಯಾರ್ಥಿನಿಯರಿಗೆ ನೀಡಬೇಕು ಮತ್ತು ಅರ್ಹ ವಿದ್ಯಾರ್ಥಿನಿಯರು ಸದರಿ ವಿದ್ಯಾರ್ಥಿವೇತನಕ್ಕಾಗಿ official scholarship page ಗೆ ಬೇಟಿಯಾಗಿ **ಅನ್ ಲೈನ್** ಮೂಲಕ ಸಂತೂರ್ **ವಿದಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುಲು** ಸೂಕ್ತ ಮಾರ್ಗದರ್ಶನ ನೀಡುವಂತೆ ಈ ಮೂಲಕ ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

ಕಾಲೇಜು ಶಿಕ್ಷಣ ನಿರ್ದೇಶಕರು,

**ಇವರಿಗೆ:**

ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳ ಗಮನಕ್ಕಾಗಿ

**ಪ್ರತಿಯನ್ನು:**

1. ಪ್ರಾದೇಶಿಕ ಜಂಟಿ ನಿರ್ದೇಶಕರು-ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಕಲಬುರಗಿ ಹಾಗೂ ಶಿವಮೊಗ್ಗ, -ತಮ್ಮ ಕಛೇರಿ ವ್ಯಾಪ್ತಿಯ ಎಲ್ಲಾ ಕಾಲೇಜುಗಳಿಗೆ ತುರ್ತಾಗಿ ಮಾಹಿತಿಯನ್ನು ರವಾನಿಸಿ ಅರ್ಹ ವಿದ್ಯಾರ್ಥಿನಿಯರಿಗೆ ಸದರಿ ವಿದ್ಯಾರ್ಥಿವೇತನ ದೊರಕಿಸಿಕೊಡಲು ಸೂಕ್ತ ಕ್ರಮ ಕೈಗೊಳ್ಳುವುದು.
2. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು, ಸದರಿ ಸುತ್ತೋಲೆಯನ್ನು ಇಲಾಖಿಅ ವೆಬ್ ಸೈಟ್ ನಲ್ಲಿ ಅಳವಡಿಸುವುದು.
3. ಕಛೇರಿ ಪ್ರತಿ.